ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 9-6-2017

# ಪತ್ರಿಕಾ ಆಮಂತ್ರಣ

1. ಅಪರಾಧ ನ್ಯಾಯ ವ್ಯವಸ್ಥೆಯನ್ನು ಪರಿಣಾಮಕಾರಿಯಾಗಿ ಬಲಪಡಿಸುವಿಕೆ ಕುರಿತು ವಿಚಾರಗೋಷ್ಠಿ:

ಮುಖ್ಯ ಅತಿಥಿ:
ಗೌರವಾನ್ವಿತ ನ್ಯಾಯಮೂರ್ತಿ ಎಸ್. ಕೆ. ಮುಖರ್ಜಿ, ಕರ್ನಾಟಕ ಉಚ್ಚ ನ್ಯಾಯಾಲಯ

ಗೌರವ ಅತಿಥಿ:

ಸುಭಾಷ್ ಚಂದ್ರ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು.

ದಿನಾಂಕ: 10-06-2017, ಶನಿವಾರ, ಸಮಯ: ಬೆಳಿಗ್ಗೆ 9-30 ಗಂಟೆಗೆ

ಸ್ಥಳ: ಸಮ್ಮೇಳನ ಸಭಾಂಗಣ, ಏಳನೇ ಮಹಡಿ, ಪೊಲೀಸ್ ಪ್ರಧಾನ ಕಚೇರಿ, ನಂ 2, ನೃಪತುಂಗ ರಸ್ತೆ, ಬೆಂಗಳೂರು – 560 001.

2. ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನ

ಕಾರ್ಯಕ್ರಮ ಉದ್ಘಾಟನೆ:
ಸಿದ್ದರಾಮಯ್ಯ,
ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಘನ ಉಪಸ್ಥಿತಿ:
ಡಿ.ವಿ. ಸದಾನಂದಗೌಡ,
ಕೇಂದ್ರ ಸಾಂಖ್ಯಿಕ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವರು

ಅನಂತ್‌ಕುಮಾರ್,
ಕೇಂದ್ರ ರಾಸಾಯನಿಕ ಹಾಗೂ ರಸಗೊಬ್ಬರ ಮತ್ತು ಸಂಸದೀಯ ವ್ಯವಹಾರಗಳ ಸಚಿವರು

ಶ್ರೀಮತಿ ನಿರ್ಮಲಾ ಸೀತಾರಾಮನ್,
ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವರು

ಅಧ್ಯಕ್ಷತೆ:

ಆರ್. ರೋಷನ್‌ಬೇಗ್,
ಮೂಲಸೌಕರ್ಯ ಅಭಿವೃದ್ಧಿ ಹಾಗೂ ಹಜ್ ಸಚಿವರು

ಪ್ರತಿಭಾನ್ವಿತ ಬಾಲಕಾರ್ಮಿಕರಿಗೆ ಪುರಸ್ಕಾರ
ಕೆ.ಜೆ. ಜಾರ್ಜ್,
ಬೆಂಗಳೂರು ಅಭಿವೃದ್ಧಿ ಸಚಿವರು

## ವಿಧಾನ ಪರಿಷತ್ತಿನಲ್ಲಿ ಇಂದು:

## ವಿಶೇಷ ವರ್ಗದವರಿಗೆ ಹಂತ ಹಂತವಾಗಿ ವಸತಿ

ಬೆಂಗಳೂರು, ಜೂನ್ 9, (ಕರ್ನಾಟಕ ವಾರ್ತೆ)

ವಸತಿ ಇಲಾಖೆಯಿಂದ ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸಲಾಗುವ ಅನುದಾನಕ್ಕನುಗುಣವಾಗಿ ಅಲೆಮಾರಿ ಹಾಗೂ ಅರೆ ಅಲೆಮಾರಿ ವರ್ಗದವರನ್ನು ಒಳಗೊಂಡಂತೆ ಎಲ್ಲಾ ವಿಶೇಷ ವರ್ಗದವರಿಗೆ ಹಂತ ಹಂತವಾಗಿ ವಸತಿ ಸೌಕರ್ಯ ಕಲ್ಪಿಸಲು ಕ್ರಮ ವಹಿಸಲಾಗುವುದು ಎಂದು ವಸತಿ ಸಚಿವ ಎಂ. ಕೃಷ್ಣಪ್ಪ ಅವರು ತಿಳಿಸಿದರು.

ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸುತ್ತಾ ಪ್ರಸಕ್ತ ಸಾಲಿನಲ್ಲಿ ದೇವರಾಜ್ ಅರಸು ವಸತಿ ಯೋಜನೆಯಡಿ 69,000 ಮನೆಗಳ ಗುರಿಯನ್ನು ನಿಗದಿಪಡಿಸಲಾಗಿದೆ. ಅಲೆಮಾರಿ ಹಾಗೂ ಅರೆ ಅಲೆಮಾರಿ ವರ್ಗದವರನ್ನು ಒಳಗೊಂಡಂತೆ 14 ವಿಶೇಷ ವರ್ಗಗಳಿಗೆ ಹಂಚಿಕೆ ಮಾಡಲಾಗುವುದು ಎಂದು ಸದನಕ್ಕೆ ತಿಳಿಸಿದರು.

ಎಸ್‌ಎಂ:ಜೆಡಿ:ಕೆಎನ್‌ವಿ:ಜಿಪಿಆರ್.

## ರಾಜ್ಯದಲ್ಲಿ 48573 ಸರ್ಕಾರಿ ಶಾಲೆಗಳು

ಬೆಂಗಳೂರು, ಜೂನ್ 9, (ಕರ್ನಾಟಕ ವಾರ್ತೆ)

ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಶಾಲೆಗಳ ಸಂಖ್ಯೆ 48,573 ಇದರಲ್ಲಿ ಕಿರಿಯ ಪ್ರಾಥಮಿಕ ಶಾಲೆಗಳು – 21,441, ಹಿರಿಯ ಪ್ರಾಥಮಿಕ ಶಾಲೆಗಳು 22,454, ಪ್ರೌಢ ಶಾಲೆಗಳು – 4,678 ಒಟ್ಟು ರಾಜ್ಯದಲ್ಲಿ 48,573 ಸರ್ಕಾರಿ ಶಾಲೆಗಳಿವೆ ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ತನ್ವೀರ್ ಸೇಠ್ ಅವರು ತಿಳಿಸಿದರು.

ವಿಧಾನ ಪರಿಷತ್‌ನಲ್ಲಿ ಸದಸ್ಯ ಟಿ.ಎ. ಶರವಣ ಅವರ ಪ್ರಶ್ನೆಗೆ ಉತ್ತರಿಸುತ್ತಾ ರಾಜ್ಯದಲ್ಲಿ ಶಿಥಿಲ ಅವಸ್ಥೆಯಲ್ಲಿರುವ ಸರ್ಕಾರಿ ಶಾಲೆಗಳ ಮಕ್ಕಳನ್ನು ಸುಸ್ಥಿತಿಯಲ್ಲಿರುವ ಕೊಠಡಿಗಳಿಗೆ ಸ್ಥಳಾಂತರ ಮಾಡುವಂತೆ ಮುಖ್ಯ ಶಿಕ್ಷಕರಿಗೆ ಸೂಚಿಸಲಾಗಿದೆ ಎಂದು ಸದಸ್ಯರಿಗೆ ತಿಳಿಸಿದರು.

ಎಸ್‌ಎಂ:ಜೆಡಿ:ಕೆಎನ್‌ವಿ:ಜಿಪಿಆರ್.

## ಶಾಲಾ–ಕಾಲೇಜುಗಳಿಗೆ ದೈಹಿಕ ಶಿಕ್ಷಕರು

ಬೆಂಗಳೂರು, ಜೂನ್ 9, (ಕರ್ನಾಟಕ ವಾರ್ತೆ)

ರಾಜ್ಯ ಸರ್ಕಾರಿ ಪ್ರಾಥಮಿಕ ಶಾಲೆಗಳ 957 ದೈಹಿಕ ಶಿಕ್ಷಕರ ಹುದ್ದೆಗಳ ನೇಮಕಾತಿ ಮಾಡುವ ಸಲುವಾಗಿ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯೊಡನೆ ಸಮಾಲೋಚನೆ ಮಾಡಲಾಗಿದೆ ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ವಕ್ಫ್ ಸಚಿವ ತನ್ವೀರ್ ಸೇಠ್ ಅವರು ತಿಳಿಸಿದರು.

ವಿಧಾನ ಪರಿಷತ್ತಿನಲ್ಲಿ ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯೆ ತಾರಾ ಅನೂರಾಧ ಕೇಳಿದ ಪ್ರಶ್ನೆಗೆ ಉತ್ತರಿಸುತ್ತಾ, ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ 469 ಹುದ್ದೆಗಳ ಪೈಕಿ 148 ಹುದ್ದೆಗಳನ್ನು ಏಪ್ರಿಲ್‌ನಲ್ಲಿ 2017 ರಲ್ಲಿ ಭರ್ತಿ ಮಾಡಲಾಗಿದೆ ಎಂದು ಸದಸ್ಯರಿಗೆ ತಿಳಿಸಿದರು.

**ಪದವಿಪೂರ್ವ ಶಿಕ್ಷಣ ಇಲಾಖೆಯಲ್ಲಿ ಒಟ್ಟು 20 ಉಪನ್ಯಾಸಕರ ಹುದ್ದೆ ಮಂಜೂರಾಗಿದ್ದು, 10 ಹುದ್ದೆಗಳನ್ನು ಬಡ್ತಿಗೆ ಮೀಸಲಿಡಲಾಗಿದೆ. ನೇರ ನೇಮಕಾತಿಯ 10 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳು ಖಾಲಿ ಇದ್ದು, ಈ ಹುದ್ದೆಗಳನ್ನು ಭರ್ತಿಮಾಡಲು ಅನುಮತಿ ನೀಡುವ ಕುರಿತು ಪರಿಶೀಲನೆಯಲ್ಲಿದೆ ಎಂದು ಸದನಕ್ಕೆ ತಿಳಿಸಿದರು.**

**ಎಸ್‌ಎಂ:ಜೆಡಿ:ಕೆಎನ್‌ವಿ:ಜಿಪಿಆರ್.**

## <u>ವಿಧಾನಸಭೆಯಲ್ಲಿ ಇಂದು</u>

ಬೆಂಗಳೂರು, ಜೂನ್ 9, (ಕರ್ನಾಟಕ ವಾರ್ತೆ)

ಮೊಣಕಾಲ್ಮೂರು ಶಾಸಕ ಎಸ್. ತಿಪ್ಪೇಸ್ವಾಮಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಇಂಧನ ಸಚಿವ ಡಿ.ಕೆ. ಶಿವಕುಮಾರ್, ಮೊಣಕಾಲ್ಮೂರು ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 803 ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಅಕ್ರಮ ಸಕ್ರಮ ಯೋಜನೆಯಡಿ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ ಎಂದರು.

ನಿಯಮ 73 ರಡಿ ಶಾಸಕ ಹೆಚ್.ಡಿ. ರೇವಣ್ಣ, ಸಿ.ಎನ್. ಬಾಲಕೃಷ್ಣ ಹಾಗೂ ಇತರ ಶಾಸಕರು ಪ್ರಸ್ತಾಪಿಸಿದ ಗಮನ ಸೆಳೆಯುವ ಸೂಚನೆಗೆ ಉತ್ತರಿಸಿದ ಇಂಧನ ಸಚಿವರು, ಚೆನ್ನರಾಯಪಟ್ಟಣ ತಾಲ್ಲೂಕಿನ ಶೆಟ್ಟಿಹಳ್ಳಿ ಗ್ರಾಮದ ಸುಸಜ್ಜಿತ ಹಾಲು ಸಂರಕ್ಷಣೆ ಮತ್ತು ಪರಿವರ್ತನೆ ಘಟಕಕ್ಕೆ ಅನುಕೂಲವಾಗುವಂತೆ 66/11 ಕೆ.ವಿ (ಕೆವಿ) ವಿದ್ಯುತ್ ಉಪಕೇಂದ್ರವನ್ನು ನಿರ್ಮಿಸಲು ಕೆಪಿಟಿಸಿಎಲ್ ಉದ್ದೇಶಿಸಿದ್ದು, ಕಾಮಗಾರಿಯನ್ನು ಗುತ್ತಿಗೆದಾರರಿಗೆ ನೀಡಲಾಗಿದೆ ಎಂದರು.

ಪಾವಗಡ ಶಾಸಕ ತಿಮ್ಮರಾಯಪ್ಪ ಅವರ ಪ್ರಶ್ನೆಗೆ ಉತ್ತರಿಸಿದ ಕೃಷಿ ಸಚಿವ ಕೃಷ್ಣ ಬೈರೇಗೌಡ, 2016-17ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭಿಮಾ ಯೋಜನೆಯಡಿ ರಾಜ್ಯದ ಎಲ್ಲಾ ಜಿಲ್ಲೆಗಳ ಒಟ್ಟು 6,17,010 ಫಲಾನುಭವಿಗಳಿಗೆ ರೂ 967.47 ಕೋಟಿಗಳ ನಷ್ಟ ಪರಿಹಾರವನ್ನು ಲೆಕ್ಕ ಹಾಕಿದ್ದು, ಇಂದಿನವರೆಗೆ 2,98,551 ಫಲಾನುಭವಿಗಳಿಗೆ ರೂ. 438.14 ಕೋಟಿ ಬೆಳೆ ವಿಮೆ ನಷ್ಟ ಪರಿಹಾರವನ್ನು ನೀಡಲಾಗಿದೆ. ಇದೇ ಪ್ರಥಮ ಬಾರಿಗೆ ಬೆಳೆ ನಷ್ಟ ಪರಿಹಾರವನ್ನು ರೈತರ ಉಳಿತಾಯ ಖಾತೆಗೆ ನೇರವಾಗಿ ಜಮೆ ಮಾಡಲಾಗಿದೆ ಎಂದರು.

ಶಿವಾನಂದ ಪಾಟೀಲ ಬಸವಬಾಗೇವಾಡಿ ಶಾಸಕ ಇವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಲೋಕೋಪಯೋಗಿ ಸಚಿವ ಎಚ್.ಸಿ. ಮಹದೇವಪ್ಪ, ವಿಜಯಪುರ-ಹುಬ್ಬಳ್ಳಿ ರಾಷ್ಟ್ರೀಯ ಹೆದ್ದಾರಿ 218 ರ ಭಾಗವಾಗಿರುವ ವಿಜಯಪುರ-ಕೊಲ್ಲಾರ ರಸ್ತೆಯನ್ನು

ಅಭಿವೃದ್ಧಿಪಡಿಸಲು ಮಂಜೂರಾತಿ ನೀಡಿದ್ದು, ರೂ 291.49 ಕೋಟಿಯ ಈ ಕಾಮಗಾರಿಗೆ ಸದರಿ ಸಾಲಿನಲ್ಲಿ 168.47 ಕೋಟಿ ಅನುದಾನ ನಿಗದಿಪಡಿಸಲಾಗಿದ್ದು, ಸದರಿ ಕಾಮಗಾರಿಯ ಟೆಂಡರ್ ಕರೆಯಲಾಗಿರುತ್ತದೆ ಎಂದರು.

ಶಾಸಕ ಕೆ.ಎಂ.ಕೃಷ್ಣಾರೆಡ್ಡಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಇಂಧನ ಸಚಿವರು, ಸರ್ವೇ ನಂ. ಜಮೀನುಗಳಲ್ಲಿ ನಿರ್ಮಾಣ ಮಾಡಿರುವ ಮನೆಗಳಿಗೂ ಸಹ ಅಗತ್ಯ ಶುಲ್ಕ ಕಟ್ಟಿಸಿಕೊಂಡು ವಿದ್ಯುತ್ ಸಂಪರ್ಕ ನೀಡಲಾಗುವುದು ಹಾಗೂ ಸದರಿ ಮನೆಗಳ ಹತ್ತಿರದಲ್ಲಿ ನಿರಂತರ ಜ್ಯೋತಿ ಯೋಜನೆಯ ಫೀಡರ್‌ಗಳು ಹಾದು ಹೋಗಿದ್ದಲ್ಲಿ, ಅಂತಹ ಮನೆಗಳಿಗೆ 24/7 ನಿರಂತರ ವಿದ್ಯುತ್ ಸೌಲಭ್ಯ ಕಲ್ಪಿಸಲಾಗುವುದು ಎಂದರು.

ದೊಡ್ಡಬಳ್ಳಾಪುರ ಶಾಸಕ ವೆಂಕಟರಮಣಯ್ಯ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಪಶುಸಂಗೋಪನಾ ಸಚಿವ ಎ. ಮಂಜು, 2017–18 ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿರುವಂತೆ ರಾಜ್ಯದಲ್ಲಿ ಹಂತ ಹಂತವಾಗಿ 1512 ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರಗಳನ್ನು ಪಶುಚಿಕಿತ್ಸಾಲಯಗಳನ್ನಾಗಿ ಮೇಲ್ದರ್ಜೆಗೆ ಏರಿಸಲು ಉದ್ದೇಶಿಸಿದ್ದು, ಸದರಿ ಸಾಲಿನಲ್ಲಿ 302 ಕೇಂದ್ರಗಳನ್ನು ಮೇಲ್ದರ್ಜೆಗೆ ಏರಿಸಲಾಗುತ್ತದೆ ಎಂದರು.

ವಿರಾಜಪೇಟೆ ಶಾಸಕ ಬೋಪಯ್ಯ ಕೆ.ಜಿ. ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಪೌರಾಡಳಿತ ಸಚಿವ ಈಶ್ವರ ಖಂಡ್ರೆ, ನಗರೋತ್ಥಾನ ಯೋಜನೆಯಡಿ (3ನೇ ಹಂತದ) ರಾಜ್ಯದ ಎಲ್ಲಾ 264 ನಗರ ಸ್ಥಳೀಯ ಸಂಸ್ಥೆಗಳಿಗೆ ರೂ. 284700 ಲಕ್ಷಗಳ ಅನುದಾನವನ್ನು ನಿಗದಿಪಡಿಸಲಾಗಿದೆ ಎಂದರು.

**ಎಸ್‌ಎಂ:ಜೆಡಿ:ಕೆಎನ್‌ಎನ್:ಜಿಪಿಆರ್.**

## ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ

ಬೆಂಗಳೂರು, ಜೂನ್ 9, (ಕರ್ನಾಟಕ ವಾರ್ತೆ)

2016–17 ನೇ ಸಾಲಿನ ಪಬ್ಲಿಕ್ ಪರೀಕ್ಷೆಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖೆಯಿಂದ ವಿವಿಧ ಪರೀಕ್ಷೆಗಳಿಗೆ ಪ್ರೋತ್ಸಾಹ ಧನ ಮಂಜೂರು ಮಾಡಲಾಗುತ್ತಿದೆ.

ಏಪ್ರಲ್ 2017 ನೇ ಮಾಹೆಯಲ್ಲಿ ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲೇ ಶೇ 60 ರಿಂದ 74.99 ಹಾಗೂ ಶೇ 75 ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡಲಾಗುವುದು. ಶೇ 60 ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ತಲಾ ರೂ 7000/– ಶೇ 75 ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ತಲಾ ರೂ 15,000.

ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಹೆಚ್ಚಿನ ವಿವರಗಳಿಗಾಗಿ ನಿರ್ದೇಶಕರು, (ಪರೀಕ್ಷೆಗಳು) ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು ರವರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

ದ್ವಿತೀಯ ಪಿ.ಯು.ಸಿ. ಅಂತಿಮ ವರ್ಷ, ಸ್ನಾತಕೋತ್ತರ ವಿಷಯವಾದ ಎಂ.ಎ., ಎಂ.ಎಸ್‌ಸಿ, ಎಂ.ಕಾಂ, ಎಂಬಿಎ, ಎಂಸಿಎ, ಎಂಎಫ್ಎ ಇತರೆ ಪರೀಕ್ಷೆಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಅನುಕ್ರಮವಾಗಿ ತಲಾ ರೂ 20,000/– ರೂ. 25,000/– ರೂ 30,000/– ಹಾಗೂ 35,000/– ನೀಡಲಾಗುವುದು.

ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಹೆಚ್ಚಿನ ವಿವರಗಳಿಗಾಗಿ ಸಂಬಂಧಪಟ್ಟ ಜಿಲ್ಲೆಯ ಜಂಟಿ/ಉಪ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ ರವರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

ವಿಶ್ವವಿದ್ಯಾಲಯ ಮಟ್ಟದಲ್ಲಿ ಸ್ನಾತಕೋತ್ತರ ಪದವಿಯಲ್ಲಿ 1 ರಿಂದ 5ನೇ ರ್‍ಯಾಂಕ್ ಪಡೆದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ (ಇಂಟರ್ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ) ಪ್ರೋತ್ಸಾಹ ಧನ ತಲಾ ರೂ 50,000/–. ಸಿ.ಎ. (ಇನ್ಸ್‌ಟಿಟ್ಯೂಟ್ ಆಫ್ ಚಾರ್ಟೆಡ್ ಅಕೌಂಟೆಂಟ್ಸ್ ಆಫ್ ಇಂಡಿಯಾ ಕೋರ್ಸ್) ತಲಾ ರೂ 50,000/– ಐ.ಡಿ. ಡಬ್ಲ್ಯೂ ಎ (ಇನ್ಸ್‌ಟಿಟ್ಯೂಟ್ ಆಫ್ ವರ್ಕ್ಸ್ ಅಕೌಂಟ್ಸ್ ಕೋರ್ಸ್) ಕೋಲ್ಕತ್ತ ತಲಾ ರೂ. 50,000/– ಹಾಗೂ ಕಂಪನಿ ಸೆಕ್ರಟರಿ (ಇನ್ಸ್‌ಟಿಟ್ಯೂಟ್ ಆಫ್ ಕಂಪನಿ ಸೆಕ್ರಟರಿ) ಕೋರ್ಸ್ ತಲಾ ರೂ.50,000/–

ಅದೇ ರೀತಿ ಫೈನಲ್ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಪ್ರತಿ ವಿದ್ಯಾರ್ಥಿಗೆ ತಲಾ ರೂ. 1,00,000/– ದಂತೆ ನೀಡಲಾಗುವುದು.

ಪ್ರತಿಷ್ಠಿತ ಶಿಕ್ಷಣ ಸಂಸ್ಥೆಗಳಾದ ಐ.ಐ.ಟಿ., ಐ.ಐ.ಎಂ., ಐ.ಐ.ಎಸ್.ಸಿ, ಮುಂತಾದ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆದ ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ರೂ 1.00 ಲಕ್ಷ ಮೊತ್ತದ ಒಂದು ಅವಧಿಯ ಧನ ಸಹಾಯ.

ಗರಿಷ್ಟ ರೂ 1.00 ಲಕ್ಷ ಅಥವಾ ವಾಸ್ತವಿಕ ಫೀಸ್ ಮತ್ತು ಬೋರ್ಡಿಂಗ್ ವೆಚ್ಚ ಇತ್ಯಾದಿ ಮೊತ್ತದಲ್ಲಿ ಯಾವುದು ಕಡಿಮೆಯೋ ಅದನ್ನು ಕೋರ್ಸು ಅವಧಿಯಲ್ಲಿ ಎರಡು ಕಂತುಗಳಲ್ಲಿ ನೀಡಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಆಯುಕ್ತರ ಕಾರ್ಯಾಲಯ, ಸಮಾಜ ಕಲ್ಯಾಣ ಇಲಾಖೆ, ಬಹುಮಹಡಿ ಕಟ್ಟಡ, ಕೇಂದ್ರ, ಕಚೇರಿ, ಬೆಂಗಳೂರು ಅಥವಾ ಇಲಾಖಾ ವೆಬ್‌ಸೈಟ್ www.sw.kar.nic.in ಭೇಟಿ ನೀಡಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

# ಇಂಜಿನಿಯರಿಂಗ್ ಪ್ರವೇಶ ಶುಲ್ಕದಲ್ಲಿ ಹೆಚ್ಚಳವಿಲ್ಲ – ಸಭೆಯಲ್ಲಿ ತೀರ್ಮಾನ

ಬೆಂಗಳೂರು, ಜೂನ್ 9, (ಕರ್ನಾಟಕ ವಾರ್ತೆ)

ಕರ್ನಾಟಕ ವೃತ್ತಿಪರ ಶಿಕ್ಷಣ ಸಂಸ್ಥೆಗಳು (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ 2006 ರನ್ವಯ 2017–18 ನೇ ಸಾಲಿನ ಇಂಜಿನಿಯರಿಂಗ್ ಕಾಲೇಜುಗಳ ಪ್ರವೇಶ ಶುಲ್ಕದ ಪರಿಷ್ಕರಣೆ ಕುರಿತಂತೆ ಅಧ್ಯಕ್ಷರು/ಕಾರ್ಯದರ್ಶಿಗಳು, ಕಾಮೆಡ್‌ಕೆ ಅಧ್ಯಕ್ಷರು/ಕಾರ್ಯದರ್ಶಿಗಳು, ಕರ್ನಾಟಕ ಅನುದಾನರಹಿತ ಖಾಸಗಿ ಇಂಜಿನಿಯರಿಂಗ್ ಕಾಲೇಜು ಸಂಘ ಹಾಗೂ ಅಧ್ಯಕ್ಷರು/ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಮತೀಯ ಅಲ್ಪಸಂಖ್ಯಾತ ವೃತ್ತಿಪರ ಶಿಕ್ಷಣ ಸಂಸ್ಥೆ, ಇವರುಗಳೊಡನೆ ಸಭೆಗಳನ್ನು ನಡೆಸಿ ಚರ್ಚಿಸಲಾಯಿತು.

ದಿನಾಂಕ: 08–06–2017 ರಂದು ನಡೆದ ಸಭೆಯಲ್ಲಿ ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಹಿತದೃಷ್ಟಿಯಿಂದ ಹಾಗೂ ಬರಗಾಲದ ಹಿನ್ನೆಲೆಯಲ್ಲಿ 2017–18 ನೇ ಸಾಲಿನಲ್ಲಿ ಇಂಜಿನಿಯರಿಂಗ್ ಪ್ರವೇಶ ಶುಲ್ಕದಲ್ಲಿ ಯಾವುದೇ ಹೆಚ್ಚಳ ಸಾಧ್ಯವಿಲ್ಲವೆಂಬ ಸರ್ಕಾರದ ಸಲಹೆ ಇಂಜಿನಿಯರಿಂಗ್ ಕಾಲೇಜುಗಳ ಪ್ರತಿನಿಧಿಗಳು ಸಕಾರಾತ್ಮಕವಾಗಿ, ಸೌಹಾರ್ದಯುತವಾಗಿ ಸ್ಪಂದಿಸಿರುತ್ತಾರೆ.

2017–18 ನೇ ಸಾಲಿನಲ್ಲಿ ಇಂಜಿನಿಯರಿಂಗ್ ಪ್ರವೇಶ ಶುಲ್ಕದಲ್ಲಿ ಯಾವುದೇ ಹೆಚ್ಚಳ ಮಾಡಿರುವುದಿಲ್ಲ. 2016–17 ನೇ ಸಾಲಿನಲ್ಲಿ ಅನ್ವಯವಾಗುತ್ತಿದ್ದ ಪ್ರವೇಶ ಶುಲ್ಕ ದರವನ್ನೇ ಪ್ರಸ್ತುತ ಸಾಲಿನಲ್ಲೂ ಮುಂದುವರೆಸಲಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಛಾಯಾಚಿತ್ರ ಶೀರ್ಷಿಕೆ:

**ಕರ್ನಾಟಕ ರಾಜ್ಯ ಸರ್ಕಾರಿ ನೌಕರರ 6 ನೇ ವೇತನ ಆಯೋಗದ ಮೊದಲ ಸಭೆ ಇಂದು ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯಲ್ಲಿ ಜರುಗಿತು. ಸಭೆಯಲ್ಲಿ ಆಯೋಗದ ಅಧ್ಯಕ್ಷ ಎಂ. ಆರ್. ಶ್ರೀನಿವಾಸಮೂರ್ತಿ, ಹಾಗೂ ಸದಸ್ಯರು ಮತ್ತು ಹಣಕಾಸು ಇಲಾಖೆಯ ಉನ್ನತಾಧಿಕಾರಿಗಳು ಭಾಗವಹಿಸಿದ್ದರು.**

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು ಜೂನ್ 9 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 11–06–2017ರ** ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ"** ಎಂಬ

ಶೀರ್ಷಿಕೆಯಡಿ **ಶ್ರೀ. ಶಶಿಕುಮಾರ್ ಮತ್ತು ತಂಡ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ರವರಿಂದ ಸುಗಮ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

2) ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ **ಶ್ರೀ. ವಾಣಿಶ್ರೀ ವಾಲಿಕರ್ ಮತ್ತು ತಂಡ, ಗುಲ್ಬರ್ಗ ಜಿಲ್ಲೆ ರವರಿಂದ ಸುಗಮ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

4) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

**I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ರಾಧಿಕಾ ರಾಜೀವ್ ಕುಮಾರ್ ಮತ್ತು ತಂಡ** ರವರಿಂದ **ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ **ಶ್ರೀವಾಣಿ ವಿದ್ಯಾ ಕೇಂದ್ರ, ರಾಜಾಜಿ ನಗರ , ಬೆಂಗಳೂರು ಶಾಲಾ ವಿದ್ಯಾರ್ಥಿಗಳಿಂದ ಹಾಡುಗಾರಿಕೆ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

**II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

- ಬೆಳಿಗ್ಗೆ 6.30 ರಿಂದ ಬೆಳಿಗ್ಗೆ 10.00 ಗಂಟೆಯವರೆಗೆ ದಿ ಹಿಂದೂ ಗ್ರೂಪ್ ವತಿಯಿಂದ **"ಸೈಕಲ್ ಡೇ"** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಜುಂಬಾ, ಯೋಗಾ, ಸೈಕಲ್ ರ್‍ಯಾಲಿ, ಓದುವ ಜೋನ್ ಹಾಗೂ ಇನ್ನಿತರೇ ಮನರಂಜನೆ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ.

## ಸುಮಾರು 1.88 ಕೋಟಿ ಯುವಜನರಿಗೆ ಉದ್ಯೋಗ ಕೌಶಲ್ಯ ತರಬೇತಿ – ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು, ಜೂನ್ 9 (ಕರ್ನಾಟಕ ವಾರ್ತೆ)–

ಮುಂಬರುವ 2030 ರ ವೇಳೆಗೆ 16 ರಿಂದ 35 ವರ್ಷ ವಯೋಮಾನದವರಿಗೆ ಉದ್ಯೋಗ ಕಲ್ಪಿಸುವ ನಿಟ್ಟಿನಲ್ಲಿ ಸುಮಾರು 1.88 ಕೋಟಿ ಯುವಜನತೆಗೆ ಕೌಶಲ್ಯ ತರಬೇತಿ ನೀಡುವ ಗುರಿಯೊಂದಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಕೌಶಲ್ಯ ಕರ್ನಾಟಕ ಯೋಜನೆಯಡಿ ಕುಶಲತೆಯ ಬೆಂಬಲ ಯುವ ಕೈಗಳಿಗೆ ಬಲ ಧ್ಯೇಯದೊಂದಿಗೆ ಸರ್ಕಾರಿ ಉಪಕರಣಗಾರ ಮತ್ತು ತರಬೇತಿ ಕೇಂದ್ರದ ಬೆಂಗಳೂರು, ಮೈಸೂರು, ದಾಂಡೇಲಿ ಮತ್ತು ಕಲಬುರಗಿ ಉಪ ಕೇಂದ್ರಗಳಲ್ಲಿ ಮೆ: ಸೀಮೆನ್ಸ್ ಇಂಡಸ್ಟ್ರಿ ಸಾಫ್ಟ್‌ವೇರ್‌ನೊಂದಿಗೆ ಶ್ರೇಷ್ಠತಾ ಕೇಂದ್ರಗಳನ್ನಾಗಿ ರೂಪಿಸಲು ಒಡಂಬಡಿಕೆಗೆ ಸಹಿ ಹಾಕಿದ ನಂತರ ಮಾತನಾಡಿದ ಮುಖ್ಯಮಂತ್ರಿಗಳು ರಾಜ್ಯದಲ್ಲಿ ಪ್ರತಿ ವರ್ಷ 11 ಲಕ್ಷ ವಿದ್ಯಾವಂತರು ಉದ್ಯೋಗ ಬಯಸಿ ಹೊರ ಬರುತ್ತಿದ್ದಾರೆ. ಪಿ.ಯು.ಸಿ. ಡಿಪ್ಲೋಮೊ, ಐ.ಟಿ.ಐ. ಹಾಗೂ ಇಂಜಿನಿಯರಿಂಗ್ ಪದವಿ ಪಡೆದ ವಿದ್ಯಾರ್ಥಿಗಳಿಗೆ ಉದ್ಯೋಗಕ್ಕೆ ಅನುಕೂಲವಾಗುವಂತೆ ಇಂದಿನ ಅಗತ್ಯಕ್ಕೆ ತಕ್ಕಂತೆ ತರಬೇತಿ ನೀಡುವುದು ಅವಶ್ಯಕವಾಗಿದೆ. ಅದನ್ನು ಗಮನದಲ್ಲಿಟ್ಟುಕೊಂಡು ಜಾಗತಿಕ ಮಟ್ಟದ ತರಬೇತಿ ನೀಡುವುದರ ಜೊತೆಗೆ ಅವರಿಗೆ ಉದ್ಯೋಗ ಕಲ್ಪಿಸುವುದರ ಮೂಲಕ ನಿರುದ್ಯೋಗ ಸಮಸ್ಯೆ ತೊಡೆದು ಹಾಕಬೇಕೆಂದು ಸರ್ಕಾರದ ಉದ್ದೇಶವಾಗಿದೆ ಎಂದು ತಿಳಿಸಿದರು.

ಪ್ರಸಕ್ತ ಸಾಲಿನಲ್ಲಿ ಸುಮಾರು 5 ಲಕ್ಷ ಯುವಕ/ಯುವತಿಯರಿಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡುವ ಗುರಿಯೊಂದಲಾಗಿದ್ದು ಕೇವಲ 21 ದಿನಗಳಲ್ಲಿ 6 ಲಕ್ಷ ಅಭ್ಯರ್ಥಿಗಳು ತರಬೇತಿ ಬಯಸಿ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಂಡಿದ್ದಾರೆ, ಪ್ರತಿ ವರ್ಷ 13 ಲಕ್ಷ ಜನರಿಗೆ ತರಬೇತಿ ನೀಡಲಾಗುವುದು ಎಂದರು.

ಆಟೋಮೋಟಿವ್, ಏರೋಸ್ಪೇಸ್, ರಕ್ಷಣೆ, ಇಂಡಸ್ಟ್ರಿಯಲ್ ಮೆಷಿನರಿ, ರಿನಿವಬಲ್ ಎನರ್ಜಿ ವಿಭಾಗಗಳಲ್ಲಿ ಒಟ್ಟು 2031.80 ಕೋಟಿ ರೂ. ಗಳ ಒಟ್ಟು ಒಡಂಬಡಿಕೆಯಾಗಲಿದೆ. ಅದರಲ್ಲಿ ಮೆ: ಸೀಮೆನ್ಸ್ ಸಂಸ್ಥೆಯ ಪಾಲು 1822.48 ಕೋಟಿ ರೂ. ಆಗಿದ್ದು ಹಾಗೂ ಕರ್ನಾಟಕ ಸರ್ಕಾರದ ಪಾಲು 219.32 ಕೋಟಿ ರೂ. ಇರುತ್ತದೆ ಎಂದು ಹೇಳಿದರು.

ಈ ಸಮಯದಲ್ಲಿ ಉಪಸ್ಥಿತರಿದ್ದ ಬೃಹತ್ ಕೈಗಾರಿಕೆ ಸಚಿವ ಆರ್.ವಿ. ದೇಶಪಾಂಡೆ ಅವರು ಮಾತನಾಡಿ ಕೌಶಲ್ಯ ತರಬೇತಿ ಕೇಂದ್ರಗಳ ಕಾರ್ಯಚಟುವಟಿಕೆಗಳನ್ನು ವಿವರಿಸಿದರು. ಸೀಮೆನ್ಸ್ ಕಂಪನಿಯ ಮ್ಯಾನೇಜಿಂಗ್ ಡೈರೆಕ್ಟರ್ ಸುಮನ್ ಬೋಸ್, ಕರ್ನಾಟಕ ಸರ್ಕಾರದ ಸರ್ಕಾರಿ ಟೂಲ್ ರೂಂ ಮತ್ತು ತರಬೇತಿ ಕೇಂದ್ರದ ಬಿ.ಎನ್. ಗದಗ್ ಅವರು ಉಪಸ್ಥಿತರಿದ್ದರು.

ಮುಖ್ಯ ಕಾರ್ಯದರ್ಶಿ ಡಾ: ಸುಭಾಶ್ ಚಂದ್ರ ಕುಂಟಿಯಾ, ಅಪರ ಮುಖ್ಯ ಕಾರ್ಯದರ್ಶಿ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಡಿ.ವಿ. ಪ್ರಸಾದ್, ಅಪರ ಮುಖ್ಯ ಕಾರ್ಯದರ್ಶಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಂಜೀವ್ ಕುಮಾರ್, ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ ಎಲ್.ಕೆ. ಅತೀಕ್ ಮುಂತಾದವರು ಹಾಗೂ ಅನೇಕ ಹಿರಿಯ ಸಚಿವರುಗಳು ಹಾಗೂ ಮೆ: ಸೀಮೆನ್ಸ್ ಇಂಡಸ್ಟ್ರಿ ಸಾಫ್ಟ್‌ವೇರ್ ಉನ್ನತಾಧಿಕಾರಿಗಳು ಉಪಸ್ಥಿತರಿದ್ದರು.

# ಕತಾರ್‌ನಲ್ಲಿರುವ ಕನ್ನಡಿಗರ ರಕ್ಷಣೆಗಾಗಿ ಚರ್ಚೆ

ಬೆಂಗಳೂರು, ಜೂನ್ 9 (ಕರ್ನಾಟಕ ವಾರ್ತೆ)-

**ಕತಾರ್ ದೇಶದಲ್ಲಿ ಪ್ರಸ್ತುತ ಉದ್ವಿಗ್ನ ಪರಿಸ್ಥಿತಿ ಉಂಟಾಗಿದ್ದು. ಈ ಪರಿಸ್ಥಿತಿಯಲ್ಲಿ ಆದೇಶದಲ್ಲಿ ನೆಲೆಯೂರಿರುವ ಅನಿವಾಸಿ ಕನ್ನಡಿಗರ ರಕ್ಷಣೆಗೆ ಸೂಕ್ತ ಭದ್ರತೆ ಕೈಗೊಳ್ಳುವಂತೆ ಅನಿವಾಸಿ ಭಾರತೀಯ ಸಮಿತಿಯ ಉಪಾಧ್ಯಕ್ಷರಾದ ಡಾ: ಆರತಿ ಕೃಷ್ಣ ಅವರು ಕತಾರ್ ದೇಶದ ಭಾರತೀಯ ರಾಯಭಾರಿ ಕುಮಾರನ್ ಅವರೊಂದಿಗೆ ಚರ್ಚಿಸಿದ್ದಾರೆ.**

**ಅದಕ್ಕೆ ಪ್ರತಿಕ್ರಿಯಿಸಿರುವ ರಾಯಭಾರಿ ಅವರು ಸಧ್ಯದ ಪರಿಸ್ಥಿತಿಯಲ್ಲಿ ಯಾವುದೇ ಸಮಸ್ಯೆಗಳು ಭಾರತೀಯರಿಗೆ ಆಗಿಲ್ಲವೆಂದು ಹಾಗೂ ಎಲ್ಲಾ ರೀತಿಯ ಭದ್ರತೆಯನ್ನು ಅವಶ್ಯಕತೆ ಇದ್ದಲ್ಲಿ ಅಲ್ಲಿನ ಅನಿವಾಸಿ ಭಾರತೀಯ ಪ್ರಜೆಗಳಿಗೆ ನೀಡಲು ತಯಾರಾಗಿರುವುದಾಗಿ ತಿಳಿಸಿದ್ದಾರೆ.**

**ಯಾವುದೇ ರೀತಿಯ ಸಮಸ್ಯೆಗಳು ಕತಾರ್‌ನಲ್ಲಿ ವಾಸಿಸುವ ಕನ್ನಡಿಗರಿಗೆ ಉಲ್ಬಣಿಸಿದರೆ ನಮ್ಮ ಇಲಾಖೆಯ ಗಮನಕ್ಕೆ ತರಬೇಕೆಂದು ಅಥವಾ 080 –22374818 ಸಂಖ್ಯೆಯನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಲಾಗಿದೆ.**